ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಐ.ಟಿ.ಐ ಕಾಲೇಜುಗಳ ಮೂಲಭೂತ ಸೌಕರ್ಯಗಳ ಕುರಿತು

ಶ್ರೀ ರಘುನಾಥ ರಾವ್ ಮಲ್ಕಾಪೂರೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

574(744) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಪ್ರಾರಂಭಿಸಲಾದ ಸರ್ಕಾರಿ ಐ.ಟಿ.ಐ ಕಾಲೇಜುಗಳ ಸಂಖ್ಯೆ ಎಷ್ಟು; ಅದರಲ್ಲಿ ಸರ್ಕಾರಿ ಕಟ್ಟಡಗಳನ್ನು ಹೊಂದಿರುವ ಐ.ಟಿ.ಐ ಕಾಲೇಜುಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡವಿಲ್ಲದೆ ನಡೆಯುತ್ತಿರುವ ಕಾಲೇಜುಗಳ ಸಂಖ್ಯೆ ಎಷ್ಟು: ಒದಗಿಸಲಾದ ಮೂಲಭೂತ ಸೌಕರ್ಯಗಳ ಪಟ್ಟಿ ನೀಡುವುದು;

(ಆ) ಪ್ರಸ್ತುತ ಹೊಸದಾಗಿ ಎಷ್ಟು ಸರ್ಕಾರಿ ಐ.ಟಿ.ಐ ಕಾಲೇಜುಗಳನ್ನು ಪ್ರಾರಂಭಿಸಲು ನಿರ್ಧರಿಸಲಾಗಿದೆ; ಇವುಗಳನ್ನು ಸ್ವಂತ ಕಟ್ಟಡದಲ್ಲಿ ಪ್ರಾರಂಭಿಸಲು ಇಚ್ಛಿಸಲಾಗಿದೆಯೇ; (ಮಾಹಿತಿ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಜಿಲ್ಲೆಗಳು ಸರ್ಕಾರಿ ಐ.ಟಿ.ಐ ಕಾಲೇಜುಗಳ ವಿಭಾಗವಾರು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಆ ಭಾಗದ ಐ.ಟಿ.ಐ ಕಾಲೇಜುಗಳ ಭೋದಕರ/ತರಬೇತಿದಾರರ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ಸಂಖ್ಯೆ, ತಾತ್ಕಾಲಿಕ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಅಲ್ಲಿರುವ ಮೂಲಭೂತ ಸೌಕರ್ಯಗಳು, ಅಗತ್ಯ ಮೂಲಭೂತ ಸೌಕರ್ಯಗಳ ಕೋರಿಕೆಯ ಮಾಹಿತಿಗಳನ್ನು ಜಿಲ್ಲಾವಾರು ಸಂಪೂರ್ಣ ಮಾಹಿತಿ ಒದಗಿಸುವುದು?